**ಸಿವಿಲ್ ಜಡ್ಜ್ ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ, ಸಿರುಗುಪ್ಪ**

**ಸಿ.ಸಿ. ನಂ. 397/2021**

**ಸಿ.ಡಬ್ಲ್ಯೂಃ 3 ಪಿ.ಡಬ್ಲ್ಯೂಃ 1**

| | | |
|---|---|---|
| ಸಾಕ್ಷಿದಾರನ ಹೆಸರು | : | ಮುದಿಯಪ್ಪ |
| ತಂದೆಯ ಹೆಸರು | : | ದ್ಯಾವಣ್ಣ |
| ವಯಸ್ಸು | : | 40 ವರ್ಷ |
| ಕೆಲಸ | : | ವ್ಯವಸಾಯ |
| ವಾಸ | : | ಚಿಕ್ಕಬಳ್ಳಾರಿ |

**ಸಾಕ್ಷಿಗೆ ದಿನಾಂಕಃ 10.02.2026 ರಂದು ಪ್ರಮಾಣ ವಚನ ಬೋಧಿಸಲಾಯಿತು**

**ಮುಖ್ಯ ವಿಚಾರಣೆ : ಸ.ಸ.ಅ. ರವರಿಂದ**

1. ನನಗೆ ಚಾಸಾ 2 ಪರಿಚಯ ಇಲ್ಲ. ಸಾಕ್ಷಿ ಪಂಚನಾಮೆಯಲ್ಲಿದ ತನ್ನ ಸಹಿಯನ್ನು ನೋಡಿ ಗುರುತಿಸಿದ್ದರಿಂದ ಪಂಚನಾಮೆಯನ್ನು ನಿಪಿಃ 1 ಎಂದು ಹಾಗೂ ಸದರಿ ಸಹಿಯನ್ನು ನಿಪಿಃ 1(ಎ) ಎಂದು ಗುರುತಿಸಲಾಯಿತು. ಸದರಿ ಸಹಿಯನ್ನು ಪೋಲಿಸ್ ಠಾಣೆಯಲ್ಲಿ ಮಾಡಿದ್ದೆನೆ. ಸುಮಾರು 5 ವರ್ಷಗಳ ಹಿಂದೆ ಮಾಡಿದ್ದೆನೆ. ನನ್ನ ಸಮಕ್ಷಮ ಯಾವುದೇ ಜಪ್ತ ಮಾಡಿಲ್ಲ. ನಾನು ಮು.ಮಾ ಹಾಗೂ ಆರೋಪಿಯನ್ನು ನೋಡಿಲ್ಲ.

**(ಈ ಹಂತದಲ್ಲಿ ಸಾಕ್ಷಿದಾರರು ಅಭಿಯೋಜಕರಿಗೆ ಸಹಾಯವಾಗಿ ಸಾಕ್ಷ್ಯನುಡಿಯುತ್ತಿಲ್ಲ ಆದ ಕಾರಣ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯನ್ನಾಗಿ ಪರಿಗಣಿಸಲು ಮತ್ತು ಪಾಟೀ ಸವಾಲು ಮಾಡಲು ಅನುಮತಿ ಕೋರಿದ್ದು, ಅನುಮತಿ ನೀಡಲಾಗಿದೆ)**

**ಪಾಟೀ ಸವಾಲುಃ ಸ.ಸ.ಅ. ರವರಿಂದ**

2. ದಿಃ 09.02.2021 ರಂದು ಪೋಲಿಸರು ನನ್ನನ್ನು ಹಾಗೂ ಚಾಸಾ 2 ರವರನ್ನು ಠಾಣೆಗೆ ಕರೆಯಿಸಿಕೊಂಡು ಅಬಕಾರಿ ದಾಳಿ ಬಗ್ಗೆ ಹೇಳಿದ್ದರು ಎಂದರೆ ರಿಯಲ್ಲ. ನಾವೆಲ್ಲರೂ ಸಂಜೆ 04.30

ಗಂಟೆಗೆ ಹೊನ್ನಾರಳ್ಳಿ ಗ್ರಾಮದ ಕ್ರಾಸ್ ಹತ್ತಿರ ಮರೆಯಾಗಿ ನೋಡಲು ಅಲ್ಲಿ ಒಬ್ಬ ವ್ಯಕ್ತಿ ಬಿಡಿ ಅಂಗಡಿ ಮುಂದೆ ಪ್ಲಾಸ್ಟಿಕ್ ಚೀಲದಲ್ಲಿ ಮದ್ಯ ಸಂಗ್ರಹಿಸಿ, ಮಾರಾಟ ಮಾಡುತ್ತಿದ್ದನು ಎಂದರೆ ಸರಿಯಲ್ಲ. ಪೋಲಿಸರು ನನ್ನ ಸಮಕ್ಷಮ ದಾಳಿ ಮಾಡಿದಾಗ ಆತನು ತಪ್ಪಿಸಿಕೊಂಡು ಓಡಿ ಹೋದನು ಎಂದರೆ ಸರಿಯಲ್ಲ. ಅಲ್ಲಿ ಇದ್ದ ಚೀಲವನ್ನು ಪರಿಶೀಲಿಸಿದಾಗ ಅಲ್ಲಿ 180 ಎಂ ಎಲ್ ನ 8 ಪಿ ಎಂ 6 ಪೌಚ್‌ಗಳು, 180 ಎಂ ಎಲ್ ನ ಒಲ್ಡ ಟವರಿನ ವಿಸ್ಕಿಯ 5 ಪೌಚ್‌ಗಳು ಹಾಗೂ 90 ಎಂ ಎಲ್ ನ ಒರಿಜಿನಲ್ ಚಾಯ್ಸ ವಿಸ್ಕಿಯ 26 ಪೌಚ್ ಗಳು ದೊರೆಯಿತು ಎಂದರೆ ಸರಿಯಲ್ಲ. ಅವುಗಳನ್ನು ಪೋಲಿಸರು ನನ್ನ ಸಮಕ್ಷಮ ಜಪ್ತ ಮಾಡಿ ತಲಾ 1 ರಂತೆ ರಾಸಾಯನಿಕ ಪರೀಕ್ಷೆಗೆ ಸ್ಯಾಂಪಲ್ ತಗೆ ದು ಬಿಳಿ ಚೀಲದಲ್ಲಿ ಹಾಕಿ ನಮ್ಮ ಸಹಿ ಇದ್ದ ಚೀಟಿ ಅಂಟಿಸಿ ನಿಪಿಃ 1 ರಂತೆ ಪಂಚಾನಮೆ ಮಾಡಿದರು ಎಂದರೆ ಸರಿಯಲ್ಲ. ಪಂಚನಾಮೆ ಸಮಯದಲ್ಲಿ ನಾನು ಸ್ಥಳದಲ್ಲಿ ಹಾಜರು ಇದ್ದು ಸಹಿ ಮಾಡಿ ಪಂಚನಾಮೆಯಲ್ಲಿ ಬರೆದಿರುವ ವಿಷಯ ನನಗೆ ಗೊತ್ತಿದ್ದರೂ ಸಹ ಆರೋಪಿತರಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲು ಆರೋಪಿತರ ಪರವಾಗಿ : ಇಲ್ಲ**

ಮರು-ವಿಚಾರಣೆ ಇಲ್ಲ.

(ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಗಿದೆ)

ಓ.ಹೇ.ಕೆ. ಸರಿ ಇದೆ.

**ಸಿವಿಲ್ ಮತ್ತು ಜೆ.ಎಂ.ಎಫ್.ಸಿ.**
**ನ್ಯಾಯಾಧೀಶರು, ಸಿರುಗುಪ್ಪ .**